157 Sep A-330-(39)
4RR
2511

# ಕರ್ನಾಟಕ ವಿಧಾನ ಪರಿಷತ್ತು

## ಮಾನ್ಯ ವಿಧಾನ ಪರಿಷತ್ತಿನ ಸದಸ್ಯರಾದ ಶ್ರೀ ರವಿಕುಮಾರ್. ಎನ್ ಇವರ ನಿಯಮ 330ರ ಸೂಚನಾ ಪತ್ರಕ್ಕೆ ಉತ್ತರ.

**ನಿಯಮ 330ರ ಮೇರೆಗೆ ಸೂಚನೆ:-**

ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರ ಕಲ್ಯಾಣ ನಿಧಿಯಿಂದ ನೊಂದಾಯಿತ ಕಾರ್ಮಿಕರಿಗೆ ಪ್ರಿವೆಂಟಿವ್ ಹೆಲ್ತ್ ಕೇರ್ ಯೋಜನೆ ಅನುಷ್ಠಾನ ಮಾಡಿದ್ದು ನೂರಾರು ಕೋಟಿ ರೂಪಾಯಿಗಳು ವೆಚ್ಚವಾಗುತ್ತಿವೆ. ಇದರಿಂದ ಕಾರ್ಮಿಕರ ಎಷ್ಟು ಕಾಯಿಲೆಗಳ ಪತ್ತೆ ಸಾಧ್ಯ ಹಾಗೂ ವೈದ್ಯಕೀಯ ಪರಿಶೀಲನೆಗೊಳಪಟ್ಟ ಕಾರ್ಮಿಕರು ಮತ್ತು ಅವರ ಅವಲಂಬಿತರು ಬಳಲುತ್ತಿರುವ ಕಾಯಿಲೆಗಳಿಗೆ ನೀಡಿರುವ ಚಿಕಿತ್ಸೆಯ ವಿವರಗಳು ಮತ್ತು ಇತ್ತೀಚಿನ ದಿನಗಳಲ್ಲಿ ಹೃದಯಾಘಾತ ಮತ್ತು ಹೃದಯ ಸ್ಥಂಭನ, ಧೂಳಿನಲ್ಲಿ ಕಟ್ಟಡ ಕಾರ್ಮಿಕರು ಕೆಲಸ ಮಾಡುವುದರಿಂದ ಶ್ವಾಸಕೋಶದಲ್ಲಿ ಕಂಡುಬರುವ ಕಾಯಿಲೆ ಹಾಗೂ ಹೆಚ್ಚಿನ ಕಾರ್ಮಿಕರು ಶ್ರಮಜೀವಿಗಳಾಗಿರುವುದರಿಂದ ಅವರ ದುರಾಭ್ಯಾಸಗಳಿಂದ ಲಿವರ್ ಹಾಗೂ ಇತರೆ ಗಂಭೀರ ಕಾಯಿಲೆಗಳಿಂದ ಬಳಲುತ್ತಿದ್ದು, ಇಂತಹ ಕಾಯಿಲೆಗಳ ಚಿಕಿತ್ಸೆಗೆ ಪ್ರಿವೆಂಟಿವ್ ಹೆಲ್ತ್ ಕೇರ್ ಯೋಜನೆಯಿಂದಾದ ಉಪಯೋಗ ಹಾಗೂ ಇತರೆ ವಿಷಯಗಳ ಕುರಿತು ಚರ್ಚಿಸಲು ಅನುಮತಿ ನೀಡುವಂತೆ ವಿನಂತಿಸುತ್ತೇನೆ.

**ಉತ್ತರ:-**

ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರ ಕಲ್ಯಾಣ ಮಂಡಳಿಯ ವತಿಯಿಂದ ರಾಜ್ಯದಲ್ಲಿ 2021-22 ರಿಂದ ಇಲ್ಲಿಯವರೆಗೆ ವಿವಿಧ ಹಂತಗಳಲ್ಲಿ ನೋಂದಾಯಿತ ಕಟ್ಟಡ ಕಾರ್ಮಿಕರು ಹಾಗೂ ಅವರ ಅವಲಂಬಿತರಿಗೆ ಪ್ರಿವೆಂಟಿವ್ ಹೆಲ್ತ್ ಕೇರ್ ಯೋಜನೆಯನ್ನು ಅನುಷ್ಠಾನ ಮಾಡಲಾಗಿರುತ್ತದೆ. ಈ ಯೋಜನೆಯಡಿ 23 ವಿವಿಧ ರೀತಿಯ ವೈದ್ಯಕೀಯ ಪರೀಕ್ಷೆಗಳನ್ನು ನಡೆಸಿ ಈ ಪರೀಕ್ಷೆಗಳ ಫಲಿತಾಂಶವನ್ನು ವೈದ್ಯಕೀಯ ಸಮಾಲೋಚನೆಯೊಂದಿಗೆ ಫಲಾನುಭವಿಗಳಿಗೆ ಒದಗಿಸಲಾಗುವುದು. ಇದರಿಂದ ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರು ಹಾಗೂ ಅವರ ಅವಲಂಬಿತರು ತಮ್ಮ ಆರೋಗ್ಯ ಸಂರಕ್ಷಣೆಗೆ ತೆಗೆದುಕೊಳ್ಳಬೇಕಾದ ಮುನ್ನೆಚ್ಚರಿಕೆ ಅಥವಾ ಮುಂದುವರೆದ ಚಿಕಿತ್ಸೆಯ ಬಗ್ಗೆ ಮಾಹಿತಿ ದೊರೆಯುತ್ತದೆ.

ಮಂಡಳಿಯ ವತಿಯಿಂದ ಈವರೆಗೆ 24.00 ಲಕ್ಷ ನೋಂದಾಯಿತ ಫಲಾನುಭವಿಗಳು ಮತ್ತು ಅವರ ಅವಲಂಬಿತರನ್ನು ಈ ಯೋಜನೆಯ ವ್ಯಾಪ್ತಿಯಲ್ಲಿ ಒಳಪಡಿಸಲಾಗಿರುತ್ತದೆ. 24.00 ಲಕ್ಷ ವೈದ್ಯಕೀಯ ವರದಿಗಳನ್ನು ವಿಶ್ಲೇಷಿಸಿದಾಗ ಈ ಕೆಳಕಂಡಂತೆ ಕಾರ್ಮಿಕರು ಮತ್ತು ಅವರ ಅವಲಂಬಿತರು ಕಾಯಿಲೆಗಳಿಗೆ ಒಳಪಡುವ ಸಂಭವನೀಯತೆ (risk) ಕಂಡುಬಂದಿರುತ್ತದೆ.

| Risk | No. of Beneficiaries | Percentage |
|---|---|---|
| Hypertension | 6,71,167 | 27.4 |
| Diabetes | 3,34,789 | 13.7 |
| Anemia | 2,26,943 | 9.3 |
| Thyroid | 12,228 | 0.5 |
| Kidney Disease | 9,782 | 0.4 |
| Liver Disease | 6,76,304 | 27.7 |
| Need Hearing Aid | 2,446 | 0.1 |
| Need Spectacles | 75,811 | 3.1 |
| HIV Positive | 1404 | 0.05 |

ಈ ಯೋಜನೆಯನ್ನು ಅನುಷ್ಠಾನ ಮಾಡುವುದರಿಂದ ಕಾರ್ಮಿಕರಿಗೆ ತಮ್ಮ ಆರೋಗ್ಯದ ಬಗ್ಗೆ ಕಾಳಜಿಯನ್ನು ಮತ್ತು ಮುನ್ನೆಚ್ಚರಿಕೆಯನ್ನು ತೆಗೆದುಕೊಳ್ಳಲು ಸಹಕಾರಿಯಾಗುತ್ತದೆ. Risk category ಯಲ್ಲಿ ಇರುವ ಕಾರ್ಮಿಕರು ಹೆಚ್ಚಿನ ಚಿಕಿತ್ಸೆಯನ್ನು ಪಡೆದು ಭವಿಷ್ಯದಲ್ಲಿ ಸಂಭವಿಸಬಹುದಾದ ಆರೋಗ್ಯದ ದುಷ್ಪರಿಣಾಮಗಳಿಂದ ತಪ್ಪಿಸಿಕೊಳ್ಳಲು ಸಾಧ್ಯವಾಗುತ್ತದೆ.

**ಕಾಇ 311 ಎಲ್ಇಟಿ 2025**

**(ಸಂತೋಷ್ ಎಸ್. ಲಾಡ್)**
**ಕಾರ್ಮಿಕ ಸಚಿವರು**